ಉತ್ತರ ಕರ್ನಾಟಕದಲ್ಲಿ ಹೈಕೋರ್ಟ್ ಪೀಠ ಸ್ಥಾಪಿಸುವ ಬಗ್ಗೆ

2170 - ಶ್ರೀ ಗೋಪಿನಾಥ್ ಆರ್. ಸಾಂದ್ರ (ಹುಬ್ಬಳ್ಳಿ-ಗ್ರಾಮಾಂತರ) : ಮಾನ್ಯ ಮುಖ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕರ್ನಾಟಕದಲ್ಲಿ ಹೈಕೋರ್ಟ್ ಸ್ಥಾಪಿಸಲು ಅಲ್ಲಿಯ ಜನ ಚಳುವಳಿ ಮಾಡುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ?

ಆ) ಈ ಬಗ್ಗೆ ಸರ್ಕಾರ ಭರವಸೆ ಕೊಟ್ಟಿದ್ದಾಗಿದ್ದರೆ ಅದನ್ನು ಅನುಷ್ಠಾನಗೊಳಿಸಲು ಏನು ಕ್ರಮ ತೆಗೆದುಕೊಳ್ಳಲಾಗಿದೆ;

ಇ) ಉತ್ತರ ಕರ್ನಾಟಕದಲ್ಲಿ ಎಂದಿನಿಂದ ಹೈಕೋರ್ಟ್ ಸ್ಥಾಪಿಸಲಾಗುವುದು?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು)

ಅ) ತಿಳಿದಿದೆ.

ಆ) ಹುಬ್ಬಳ್ಳಿ - ಧಾರವಾಡದಲ್ಲಿ ಹೈಕೋರ್ಟ್ ಪೀಠವನ್ನು ಸ್ಥಾಪಿಸುವ ಬಗ್ಗೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುವುದೆಂದು ಆಶ್ವಾಸನೆ ನೀಡಿದ್ದು ನಿಜ. ಈ ಬಗ್ಗೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗಿತ್ತು. ಕೇಂದ್ರ ಸರ್ಕಾರ ನೇಮಿಸಿದ ಜಸ್ವಂತ್‌ಸಿಂಗ್ ಆಯೋಗ ಉಚ್ಚ ನ್ಯಾಯಾಲಯಗಳ ಪೀಠಗಳನ್ನು ಅವುಗಳ ಕೇಂದ್ರ ಸ್ಥಾನದಿಂದ ಹೊರಗಿನ ಪ್ರದೇಶಗಳಲ್ಲಿ ಸ್ಥಾಪಿಸುವುದು ಅಪೇಕ್ಷಣೀಯವೆಂದು ಅಭಿಪ್ರಾಯ ಪಟ್ಟಿದ್ದರಿಂದ, ಅದರಂತೆ ಹುಬ್ಬಳ್ಳಿ - ಧಾರವಾಡದಲ್ಲಿ ಅಂತಹ ಪೀಠವನ್ನು ಸ್ಥಾಪಿಸುವ ಸರ್ಕಾರದ ಪ್ರಸ್ತಾವನೆಗೆ ಉಚ್ಚ ನ್ಯಾಯಾಲಯದ ಒಪ್ಪಿಗೆ ಕೋರಲಾಗಿತ್ತು. ಆದರೆ ಈ ಪ್ರಸ್ತಾವನೆಗೆ ಉಚ್ಚ ನ್ಯಾಯಾಲಯವು ಒಪ್ಪಿಗೆ ನೀಡಿಲ್ಲ. ಉಚ್ಚ ನ್ಯಾಯಾಲಯದ ಒಪ್ಪಿಗೆ ಇಲ್ಲದೆ ಸರ್ಕಾರ ಈ ಬಗ್ಗೆ ಯಾವ ಮುಂದಿನ ಕ್ರಮ ಕೈಗೊಳ್ಳುವಂತಿಲ್ಲ. ಸಚಿವ ಸಂಪುಟದ ನಿರ್ಣಯದಂತೆ ಮತ್ತೆ ವಿಷಯವನ್ನು ಮುಖ್ಯ ನ್ಯಾಯಾಧೀಶರೊಂದಿಗೆ ಚರ್ಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಉಪ ಪ್ರಶ್ನೆ ಅ) ನೀಡಿರುವ ಉತ್ತರದಿಂದ ಪ್ರಶ್ನ ಉದ್ಭವಿಸುವುದಿಲ್ಲ.

ಬೀದರ್ ಜಿಲ್ಲೆಯಲ್ಲಿ ಸರ್ಕಾರಿ ಬಸ್ಸುಗಳ ಸಂಖ್ಯೆ

2144 - ಶ್ರೀ ಗುರುಪಾದಪ್ಪ ನಾಗ್ಮಾರಪಲ್ಲಿ (ಔರಾದ್) : ಮಾನ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಬಸ್ಸುಗಳ ರಾಷ್ಟ್ರೀಕರಣಕ್ಕೆ ಮೊದಲು ಇದ್ದ ಖಾಸಗಿ ಬಸ್ಸುಗಳು ಮತ್ತು ಸರ್ಕಾರಿ ಬಸ್ಸುಗಳ ಸಂಖ್ಯೆ ಎಷ್ಟು?

ಆ) ಬಸ್ಸುಗಳ ರಾಷ್ಟ್ರೀಕರಣದ ನಂತರ ಹಾಲಿ ಇರುವ ಬಸ್ಸುಗಳ ಸಂಖ್ಯೆ ಎಷ್ಟು?

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು)

ಅ) ರಾಷ್ಟ್ರೀಕರಣದ ಪೂರ್ವದಲ್ಲಿ ಬೀದರ್ ಜಿಲ್ಲೆಯಲ್ಲಿ 83 ಖಾಸಗಿ ಬಸ್ಸುಗಳ ಮತ್ತು 88 ಕರ್ನಾಟಕ ರಾಜ್ ರಸ್ತೆ ಸಾರಿಗೆ ನಿಗಮದ ಬಸ್ಸುಗಳು ಸಂಚರಿಸುತ್ತಿದ್ದವು.

ಆ) ಹಾಲಿ ಬೀದರ್ ಜಿಲ್ಲೆಯಲ್ಲಿ ನಿಗಮದ ಒಟ್ಟು 240 ಕೆ.ಎಸ್.ಆರ್.ಟಿ.ಸಿ.ಬಸ್ಸುಗಳು ಸಂಚರಿಸುತ್ತಿವೆ.

ಔರಾದ್ ತಾಲ್ಲೂಕಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಬಸ್ ಡಿಪೋ ಪ್ರಾರಂಭಿಸುವುದು

2142 - ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಸುವರೆ?

1) ಬೀದರ್ ಜಿಲ್ಲೆಯ ಔರಾದಿನಲ್ಲಿ ರಾಜ್ಯ ರಸ್ತೆ ಸಾರಿಗೆ ಬಸ್ ಡಿಪೋ ಮಂಜೂರಾಗಿದೆಯೇ; ಹಾಗಿದ್ದಲ್ಲಿ ಎಂದು ಮಂಜೂರಾಯಿತು?